## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲಾಗಿರುವ ಘಟಕಗಳ **ವಾರ್ಷಿಕ ನಿರ್ವಹಣೆ ಗುತ್ತಿಗೆಯನ್ನು** ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 17 ಗ್ರಾನೀಸ (8)2016, ದಿನಾಂಕ:09.01.2017.
2. ಸರ್ಕಾರದ ಆದೇಶ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾನೀಸ (8)2016, ದಿನಾಂಕ:17.07.2017.
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್.ಸಂಸ್ಥೆರವರ ಪತ್ರ ಸಂಖ್ಯೆ: ಕೆಆರ್ಐಡಿಎಲ್/ಕಾಮಗಾರಿ/ಶುಕುನೀಘ/ಹಂತ-3/2017-18, ದಿನಾಂಕ:20.12.2017.
4. ದಿನಾಂಕ:19.02.2018ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಜರೂಗಿದ ಸಭೆಯಲ್ಲಿ ಸೂಚಿಸಿದಂತೆ.

*****

**ಪೀಠಿಕೆ:**

ಮೇಲೆ(1&2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಮೊದಲ ಹಂತದಲ್ಲಿ ಸಾಮಾನ್ಯ ಮಾದರಿಯ 1073 ನೀರು ಶುದ್ಧೀಕರಣ ಘಟಕಗಳನ್ನು, ಎರಡನೇ ಹಂತದಲ್ಲಿ ಕಿಯೋಸ್ಕ್ ಮಾದರಿಯ 1454 ನೀರು ಶುದ್ಧೀಕರಣ ಘಟಕಗಳನ್ನು ಮತ್ತು ಮೂರನೇ ಹಂತದಲ್ಲಿ ಸಾಮಾನ್ಯ & ಕಿಯೋಸ್ಕ್ ಮಾದರಿಯ 1680 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಿರುವ ಘಟಕಗಳ ಪೈಕಿ, ಈಗಾಗಲೇ ಅನುಷ್ಠಾನಗೊಳಿಸಿ, ಕಾರ್ಯಾಚರಣೆಯಲ್ಲಿರುವ ನೀರು ಶುದ್ಧೀಕರಣ ಘಟಕಗಳ **ವಾರ್ಷಿಕ ನಿರ್ವಹಣೆ ಗುತ್ತಿಗೆಯನ್ನು (AMC) ದಿನಾಂಕ:31.12.2017ರವರೆಗೆ** ಕೆ.ಆರ್.ಐ.ಡಿ.ಎಲ್.ಸಂಸ್ಥೆಯವರು ನಿರ್ವಹಿಸಲು ಅನುಮೋದನೆ ನೀಡಲಾಗಿತ್ತು.

ಮುಂದುವರೆದು, ಮೇಲೆ(3)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್.ಸಂಸ್ಥೆರವರ ಪತ್ರದನ್ವಯ, ಮೇಲೆ(4)ರಲ್ಲಿ ಓದಲಾದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನೆಡೆಸಿದ ಸಭೆಯಲ್ಲಿ ಮಾನ್ಯ ಸಚಿವರು ಸೂಚನೆಯಂತೆ, **ದಿನಾಂಕ:30.06.2018ರವರೆಗಿನ ವಾರ್ಷಿಕ ನಿರ್ವಹಣೆ ಗುತ್ತಿಗೆ (AMC)**ಗೆ ಸಂಬಂಧಿಸಿದಂತೆ ಕೆ.ಆರ್.ಐ.ಡಿ.ಎಲ್.ಸಂಸ್ಥೆಯವರೇ ನಿರ್ವಹಿಸಿ, ಶುದ್ಧ ಕುಡಿಯುವ ನೀರನ್ನು ಪೂರೈಸಿ ಜನರ ಆರೋಗ್ಯದ ಹಿತರಕ್ಷಣೆ ಕಾಪಾಡುವ ಉದ್ದೇಶದಿಂದ ಆದೇಶ ಹೊರಡಿಸಲು ಸರ್ಕಾರ ನಿರ್ಧರಿಸಿದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/10/ಗ್ರಾನೀಸ(8)2018, ಬೆಂಗಳೂರು, ದಿನಾಂಕ:20.02.2018**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ(1&2)ರಲ್ಲಿ ಓದಲಾದ ಸರ್ಕಾರದ ಆದೇಶಗಳನ್ವಯ, ಮೇಲೆ(3)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್.ಸಂಸ್ಥೆರವರ ಪತ್ರದನ್ವಯ, ಮೇಲೆ(4)ರಲ್ಲಿ ಓದಲಾದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಸೂಚನೆಯಂತೆ, ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿ ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಸಾಮಾನ್ಯ ಮಾದರಿಯ (ಮೊದಲನೇ ಹಂತದ) ಮತ್ತು ಕಿಯೋಸ್ಕ್ ಮಾದರಿಯ (ಎರಡನೇ ಹಂತದ) ಹಾಗೂ ಸಾಮಾನ್ಯ & ಕಿಯೋಸ್ಕ್ ಮಾದರಿಯ (ಮೂರನೇ ಹಂತದ) ನೀರು ಶುದ್ಧೀಕರಣ ಘಟಕಗಳ ಪೈಕಿ ಈಗಾಗಲೇ ಕಾರ್ಯಾಚರಣೆಗೊಂಡಿರುವ **ನೀರು ಶುದ್ಧೀಕರಣ ಘಟಕಗಳ ವಾರ್ಷಿಕ ನಿರ್ವಹಣೆ ಗುತ್ತಿಗೆನ್ನು (AMC) 30ನೇ-ಜೂನ್-2018ರವರೆಗೆ** ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ನಿರ್ವಹಿಸಲು ಈ ಕೆಳಕಂಡ ಮಾನದಂಡಗಳನ್ವಯ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

- ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಈಗಾಗಲೇ ಮೂರು ಹಂತದಲ್ಲಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳ **ವಾರ್ಷಿಕ ನಿರ್ವಹಣೆ ಗುತ್ತಿಗೆಯನ್ನು (AMC) ದಿನಾಂಕ:30.06.2018ರವರೆಗೆ** ಮೇಲೆ(1&2)ರಲ್ಲಿ ಓದಲಾದ ಸರ್ಕಾರದ **ಆದೇಶಗಳಲ್ಲಿನ ಮಾರ್ಗಸೂಚಿಗಳನ್ವಯ** ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ನಿರ್ವಹಿಸಲು ಕ್ರಮವಹಿಸತಕ್ಕದ್ದು. ಸದರಿ ವಾರ್ಷಿಕ ನಿರ್ವಹಣೆ ಗುತ್ತಿಗೆಯನ್ನು (AMC) ತಗಲುವ ವೆಚ್ಚಕ್ಕೆ ಸಂಬಂಧಿಸಿದಂತೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಕೆ.ಆರ್.ಐ.ಡಿ.ಎಲ್.ಸಂಸ್ಥೆರವರಿಗೆ ನೇರವಾಗಿ ಭರಿಸುವುದು. ಇದಕ್ಕೆ ಸಂಬಂಧಪಟ್ಟ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸಲ್ಲಿಸಲು ಕ್ರಮವಹಿಸುವುದು.

- ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಈಗಾಗಲೇ ಮೂರು ಹಂತದಲ್ಲಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳಲ್ಲಿ **ಬಿಡಿ ಭಾಗಗಳಾದ ಹೈಪ್ರೆಷರ್ ಪಂಪ್‌ಗಳು, ಮೆಂಬ್ರೇನ್‌ಗಳು, ಕಾಯಿನ್ ಬಾಕ್ಸ್‌ಗಳು, ಪ್ಯಾನಲ್ ಬೋರ್ಡ್‌ಗಳು ಹಾಗೂ ಇನ್ನಿತರೇ ಬಿಡಿ ಭಾಗಗಳ ದುರಸ್ಥಿಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಕೂಡಲೇ ಕೈಗೊಂಡು ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಪೂರೈಸತಕ್ಕದ್ದು.** ಸದರಿ ಘಟಕಗಳ ದುರಸ್ಥಿಗೆ ತಗಲುವ ವೆಚ್ಚಕ್ಕೆ ಸಂಬಂಧಿಸಿದಂತೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಕೆ.ಆರ್.ಐ.ಡಿ.ಎಲ್.ಸಂಸ್ಥೆರವರಿಗೆ ನೇರವಾಗಿ ಭರಿಸಲಾಗುವುದು. ಇದಕ್ಕೆ ಸಂಬಂಧಪಟ್ಟ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆರವರು ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸಲ್ಲಿಸಲು ಕ್ರಮವಹಿಸುವುದು.

ತಮ್ಮ ವಿಶ್ವಾಸಿ,

20/02

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು–1)ರವರ ಶಾಖಾ ಕಛೇರಿ, ಕಾಲೇಜುರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
6. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು–1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು–1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–09.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು–09.
12. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–09.
13. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
15. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
16. ರಾಜ್ಯದ ಎಲ್ಲಾ (31) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು,
18. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು,
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿರಾಜ್ಯ ಸಂಸ್ಥೆ, ಲಲಿತ್ ಮಹಲ್‌ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
22. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿರಸ್ತೆ, ಬೆಂಗಳೂರು–560009ರವರ ಆಪ್ತ ಕಾರ್ಯದರ್ಶಿ.
23. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆರವರ ಆಪ್ತ ಸಹಾಯಕರು.
24. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು–560001.
25. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ–(10ಪ್ರತಿಗಳು).
26. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
27. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ)
28. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.